**All India Radio: Bangalore**
**Regional Bulletin In Kannada**
**7.06.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<><><><>**

ಮುಖ್ಯಾಂಶಗಳು

1. ನಾಡಿನಾದ್ಯಂತ ಮುಸ್ಲಿಂ ಬಾಂಧವರಿಂದ ತ್ಯಾಗ - ಬಲಿದಾನದ ಬಕ್ರಿದ್ ಆಚರಣೆ
2. ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ವಿಕಸಿತ ಸಂಕಲ್ಪ ಅಭಿಯಾನ ; ಇಳುವರಿ ಹೆಚ್ಚಿಸಲು ಕೃಷಿ ವಿಜ್ಞಾನಿಗಳ ಸಲಹೆ
3. ರೈತರಿಗೆ ಹೆಚ್ಚಿನ ಸೌಲಭ್ಯ ಕಲ್ಪಿಸುವುದೇ ಕೇಂದ್ರದ ಆದ್ಯತೆ - ಪ್ರಧಾನಿ ನರೇಂದ್ರ ಮೋದಿ
4. ಇಂದು ವಿಶ್ವ ಆಹಾರ ಸುರಕ್ಷತಾ ದಿನ ; ಎಲ್ಲೆಡೆ ಜನ ಜಾಗೃತಿ

<><><><>

ತ್ಯಾಗ-ಬಲಿದಾನದ ಸಂಕೇತವಾದ ಬಕ್ರಿದ್ ಹಬ್ಬವನ್ನು ರಾಜ್ಯಾದ್ಯಂತ ಮುಸ್ಲಿಂ ಬಾಂಧವರು ಶ್ರದ್ಧಾಭಕ್ತಿಗಳಿಂದ ಆಚರಿಸುತ್ತಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ, ದೇವನಹಳ್ಳಿ, ಹೊಸಕೋಟೆ, ನೆಲಮಂಗಲದಲ್ಲಿ ಮುಸ್ಲಿಂ ಬಾಂಧವರು ಈದ್ಗಾ ಮೈದಾನದಲ್ಲಿ ಸಮೂಹಿಕ ಪ್ರಾರ್ಥನೆ ಸಲ್ಲಿಸಿ ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಂಡಿದ್ದಾರೆ. ಈ ಸಂದರ್ಭದಲ್ಲಿ ಮುಸ್ಲಿಂ ಗುರುಗಳು ಪ್ರವಚನ ನೀಡಿದರು. ಹಾಸನ ಜಿಲ್ಲೆಯ ವಿವಿಧ ಈದ್ಗಾ ಮೈದಾನಗಳಲ್ಲಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಲಾಯಿತು. ಯಾವುದೇ ಅಹಿತಕರ ಘಟನೆ ನಡೆಯದಂತೆ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗಿತ್ತು. ದಾವಣಗೆರೆ ಜಿಲ್ಲೆಯಾದ್ಯಂತ ಮುಸ್ಲಿಂ ಬಾಂಧವರು ಶ್ರದ್ಧಾಭಕ್ತಿಯಿಂದ ಹಬ್ಬ ಆಚರಿಸಿದರು. ಕೋಲಾರದ ಈದ್ಗಾ ಮೈದಾನದಲ್ಲಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಲಾಯಿತು. ಯಾವುದೇ ಅಹಿತಕರ ಘಟನೆ ಸಂಭವಿಸಿದಂತೆ ನಗರದಾದ್ಯಂತ ಬಿಗಿ ಭದ್ರತೆ ಕಲ್ಪಿಸಲಾಗಿತ್ತು. ಚಿಕ್ಕಬಳ್ಳಾಪುರದ ಪ್ರಶಾಂತ ನಗರದಲ್ಲಿರುವ ಈದ್ಗಾ ಮೈದಾನದಲ್ಲಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಲಾಯಿತು. ಚಿಕ್ಕಮಗಳೂರು ಜಿಲ್ಲೆಯಾದ್ಯಂತ ಬಕ್ರಿದ್ ಹಬ್ಬವನ್ನು ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು. ಹೊಸಬಟ್ಟೆ ತೊಟ್ಟು ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಳ್ಳುತ್ತಿರುವ ದೃಶ್ಯ ಎಲ್ಲೆಡೆ ಕಂಡು ಬರುತ್ತಿತ್ತು. ಕೊಪ್ಪಳ ಜಿಲ್ಲೆಯಾದ್ಯಂತ ಮುಸ್ಲಿಂ ಬಾಂಧವರು ಸಾಮಾಜಿಕ ಪ್ರಾರ್ಥನೆ ಸಲ್ಲಿಸಿ ಶ್ರದ್ಧಾಭಕ್ತಿಯಿಂದ ಹಬ್ಬ ಆಚರಿಸಿದರು. ಶಾಸಕ ರಾಘವೇಂದ್ರ ಹಿಟ್ನಾಳ್, ಸಂಸದ ರಾಜಶೇಖರ ಹಿಟ್ನಾಳ್ ಮೊದಲಾದವರು ಮುಸ್ಲಿಂಗ ಬಾಂಧವರಿಗೆ ಶುಭ ಕೋರಿದರು. ಗದಗದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.

ಪಾಟೀಲ್ ಸಾಮೂಹಿಕ ಪ್ರಾರ್ಥನೆಯಲ್ಲಿ ಪಾಲ್ಗೊಂಡು ಮುಸ್ಲಿಂ ಸ್ನೇಹಿತರಿಗೆ ಶುಭ ಕೋರಿದರು. ವಿಜಯಪುರ ನಗರದ ವಿವಿಧ ಮಸೀದಿಗಳಲ್ಲಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಲಾಯಿತು. ಹಬ್ಬದ ಅಂಗವಾಗಿ ರಾಷ್ಟ್ರಪತಿ ದ್ರೌಪದಿಮುರ್ಮು, ಪ್ರಧಾನಮಂತ್ರಿ ನರೇಂದ್ರ ಮೋದಿ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ಮುಸ್ಲಿಂ ಬಾಂಧವರಿಗೆ ಶುಭಾಶಯ ಕೋರಿದ್ದಾರೆ.

<><><><>

ರೈತರು ವ್ಯವಸಾಯಕ್ಕೆ ಭೂಮಿಯನ್ನು ಹದಗೊಳಿಸುವಲ್ಲಿ ವಿಜ್ಞಾನಿಗಳ ಸಲಹೆ ಮತ್ತು ಮಾರ್ಗದರ್ಶನ ಅವಶ್ಯಕ ಎಂದು ರಾಯಚೂರು ಕೃಷಿ ವಿಶ್ವ ವಿದ್ಯಾಲಯದ ಆಡಳಿತ ಮಂಡಳಿ ಸದಸ್ಯ ಹಾಗೂ ಪ್ರಗತಿಪರ ರೈತ ತಿಮ್ಮಣ್ಣ ಚೌಡಿ ಹೇಳಿದ್ದಾರೆ. ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಗಂಗಾವತಿ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಡಾ. ರಾಘವೇಂದ್ರ ಯಾಲಿಗಾರ, ಕೊಪ್ಪಳ ಕೃಷಿ ವಿಸ್ತರಣ ಶಿಕ್ಷಣ ಕೇಂದ್ರದ ಮುಖ್ಯಸ್ಥ ಡಾ. ಎಂ.ವಿ. ರವಿ, ಕೃಷಿ ವಿಜ್ಞಾನಿಗಳಾದ ಜ್ಯೋತಿ, ವಾಮನಮೂರ್ತಿ ಮೊದಲಾದವರು ಉಪಸ್ಥಿತರಿದ್ದರು.

**ಧ್ವನಿ : ತಿಮ್ಮಣ್ಣ ಚೌಡಿ (೩೦ ಸೆಕೆಂಡ್‌ಗಳು)**

ಗ್ರಾಮೀಣ ಪ್ರದೇಶಗಳಲ್ಲಿ ಮುಂಗಾರು ಹಂಗಾಮಿನಲ್ಲಿ ಕೈಗೊಳ್ಳಬಹುದಾದ ಕೃಷಿ ಚಟುವಟಿಕೆಗಳ ಬಗ್ಗೆ ಮಾಹಿತಿ ನೀಡುವುದೇ ವಿಕಸಿತ ಕೃಷಿ ಸಂಕಲ್ಪ ಅಭಿಯಾನದ ಮುಖ್ಯ ಉದ್ದೇಶವಾಗಿದೆ ಎಂದು ದಾವಣಗೆರೆ ಕೃಷಿ ವಿಜ್ಞಾನ ಕೇಂದ್ರದ ಬೇಸಾಯ ತಜ್ಞ ಡಾ. ಬಸವನಗೌಡ ಹೇಳಿದ್ದಾರೆ. ದಾವಣಗೆರೆ ತಾಲೂಕಿನಲ್ಲಿ ಜರುಗಿದ ಕೃಷಿ ಸಂಕಲ್ಪ ಅಭಿಯಾನದಲ್ಲಿ ರೈತರಿಗೆ ಮಾಹಿತಿ ನೀಡಿ ಮಾತನಾಡಿದ ಅವರು, ಮಣ್ಣು ಪರೀಕ್ಷೆ, ಬಿತ್ತನೆ ಬೀಜ ಆಯ್ಕೆ ಕುರಿತಂತೆ ಕೃಷಿ ವಿಜ್ಞಾನಿಗಳು ಕಾಲ-ಕಾಲಕ್ಕೆ ನೀಡುವ ಸಲಹೆಗಳನ್ನು ಪಡೆದುಕೊಂಡು ಹೆಚ್ಚಿನ ಇಳುವರಿ ಸಾಧಿಸಬೇಕು ಎಂದು ಸಲಹೆ ನೀಡಿದರು.

**ಧ್ವನಿ : ಡಾ. ಬಸವನಗೌಡ (೩೦ ಸೆಕೆಂಡ್‌ಗಳು)**

<><><><>

ದೇಶದ ರೈತರ ಕಲ್ಯಾಣಕ್ಕೆ ಕೇಂದ್ರ ಸರ್ಕಾರ ಬದ್ಧವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಪುನರುಚ್ಛರಿಸಿದ್ದಾರೆ. ಕೇಂದ್ರದಲ್ಲಿ ಎನ್‌ಡಿಎ ಸರ್ಕಾರ ೧೧ ವರ್ಷಗಳನ್ನು ಪೂರೈಸುತ್ತಿರುವ ಸಂದರ್ಭದಲ್ಲಿ ಮಾತನಾಡಿದ ಅವರು, ರೈತರಿಗೆ ಹೆಚ್ಚಿನ ಸೌಲಭ್ಯ ಕಲ್ಪಿಸುವುದು ಕೇಂದ್ರ ಆದ್ಯತೆಯಾಗಿದೆ ಎಂದು ಹೇಳಿದರು. ಕಳೆದ ೧೧ ವರ್ಷಗಳಿಂದ ಕೇಂದ್ರ ಸರ್ಕಾರದ ವಿವಿಧ ಉಪಕ್ರಮಗಳು ರೈತರ ಸಮೃದ್ಧಿಯನ್ನು ಹೆಚ್ಚಿಸಿವೆ ಮತ್ತು ಕೃಷಿ ಕ್ಷೇತ್ರದ ಒಟ್ಟಾರೆ ಪರಿವರ್ತನೆಯನ್ನು ಖಚಿತಪಡಿಸಿವೆ ಎಂದರು. ಮಣ್ಣಿನ ಆರೋಗ್ಯ ಮತ್ತು ನೀರಾವರಿಯಂತಹ

ವಿಷಯಗಳ ಮೇಲೆ ಸರ್ಕಾರ ಗಮನಹರಿಸಿದ್ದು, ಇದು ಬಹಳ ಪ್ರಯೋಜನಕಾರಿಯಾಗಿದೆ. ರೈತರ ಕಲ್ಯಾಣಕ್ಕಾಗಿ ಸರ್ಕಾರದ ಪ್ರಯತ್ನಗಳು ಮುಂಬರುವ ದಿನಗಳಲ್ಲಿ ಹೆಚ್ಚಿನ ಹುರುಪಿನಿಂದ ಮುಂದುವರಿಯಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

<><><>

ಗ್ರಾಮೀಣ ಜನರ ಆರ್ಥಿಕ ಪರಿಸ್ಥಿತಿ ಸುಧಾರಣೆಯಾಗಬೇಕು ಎಂಬ ಉದ್ದೇಶದಿಂದ ಜಾರಿಗೊಳಿಸಿರುವ ಮಹಾತ್ಮಾಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಮೂಲಕ ರೈತರು ಆರ್ಥಿಕವಾಗಿ ಸಬಲರಾಗಿರುವ ಯಶೋಗಾಥೆಗಳು ರಾಜ್ಯಾದ್ಯಂತ ವರದಿಯಾಗುತ್ತಿವೆ. ಕೋಲಾರ ತಾಲೂಕಿನ ಚಿಕ್ಕ ಅಯ್ಯೂರು ಗ್ರಾಮದ ಉದ್ಯೋಗ ಖಾತರಿ ಯೋಜನೆಯ ಫಲಾನುಭವಿ ಸತೀಶ್, ಗುಲಾಬಿ ಹೂ ಬೆಳೆದು ಪ್ರತಿ ತಿಂಗಳು ೫೦ ರಿಂದ ೬೦ ಸಾವಿರ ರೂಪಾಯಿ ಆದಾಯ ಗಳಿಸುತ್ತಿರುವುದಾಗಿ ತಮ್ಮ ಅನಿಸಿಕೆಯನ್ನು ಆಕಾಶವಾಣಿಯೊಂದಿಗೆ ಹಂಚಿಕೊಂಡಿದ್ದಾರೆ.

**ಧ್ವನಿ : ಸತೀಶ್**

<><><>

ಪ್ರತಿವರ್ಷ ಜೂನ್ ೭ ರಂದು ವಿಶ್ವ ಆಹಾರ ಸುರಕ್ಷತಾ ದಿನವನ್ನು ಆಚರಿಸಲಾಗುತ್ತದೆ. ಆಹಾರ ಸುರಕ್ಷತೆ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವುದು ಈ ದಿನದ ಉದ್ದೇಶ. ದೇಹಕ್ಕೆ ಒಗ್ಗುವ ಪೌಷ್ಠಿಕಾಂಶದ ಆಹಾರ ಸೇವನೆಯನ್ನು ಉತ್ತೇಜಿಸಿ ಉತ್ತಮ ಆರೋಗ್ಯ ಕಾಪಾಡಿಕೊಳ್ಳುವಂತೆ ಪ್ರೋತ್ಸಾಹಿಸಲಾಗುತ್ತಿದೆ.

<><><>

ಮೀನುಗಾರಿಕೆಯಿಂದ ಸ್ವ-ಉದ್ಯೋಗ ಮತ್ತು ಸ್ವವಲಂಬನೆ ಸಾಧ್ಯ ಎಂದು ಕೊಪ್ಪಳ ಲೋಕಸಭಾ ಸದಸ್ಯ ಕೆ. ರಾಜಶೇಖರ ಹಿಟ್ನಾಳ್ ಅಭಿಪ್ರಾಯಪಟ್ಟಿದ್ದಾರೆ. ಕೊಪ್ಪಳದಲ್ಲಿಂದು ಪ್ರಧಾನಮಂತ್ರಿ ಮತ್ಸ್ಯ ಸಂಪದ ಯೋಜನೆಯಡಿ ಮತ್ಸ್ಯ ವಾಹಿನಿ ಮೊಬೈಲ್ ಫಿಶ್ ಕ್ಯಾಂಟೀನ್ ಸೌಲಭ್ಯವನ್ನು ಫಲಾನುಭವಿಗಳಿಗೆ ವಿತರಿಸಿ ಮಾತನಾಡಿದರು. ಮೀನುಗಾರಿಕಾ ಇಲಾಖೆಯಿಂದ ನೀಡಿರುವ ವಾಹನವನ್ನು ಸಮಪರ್ಕವಾಗಿ ಬಳಸಿಕೊಂಡು ಆರ್ಥಿಕ ಪ್ರಗತಿ ಸಾಧಿಸುವಂತೆ ಸಂಸದರು ಹಿತವಚನ ಹೇಳಿದರು. ಮೀನುಗಾರಿಕೆ ಇಲಾಖೆಯ ಉಪನಿರ್ದೇಶಕ ಶ್ರೀನಿವಾಸ ಕುಲಕರ್ಣಿ ಮಾತನಾಡಿ, ಕೊಪ್ಪಳ ಜಿಲ್ಲೆಗೆ ಮೂರು ಮೊಬೈಲ್ ಫಿಶ್ ಕ್ಯಾಂಟೀನ್‌ಗಳನ್ನು ಹಂಚಿಕೆ ಮಾಡಲಾಗಿದೆ. ಈ ಯೋಜನೆಯಡಿ ಫಲಾನುಭವಿ ೫೦ ಸಾವಿರ ರೂಪಾಯಿ ಠೇವಣಿ ಇಟ್ಟು ನಂತರ ಪ್ರತಿ ತಿಂಗಳು ಮೂರು ಸಾವಿರ ರೂಪಾಯಿಗಳನ್ನು ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮಕ್ಕೆ ಬಾಡಿಗೆ ರೂಪದಲ್ಲಿ ಪಾವತಿಸಬೇಕು ಎಂದು ಮಾಹಿತಿ ನೀಡಿದರು.

<><><>

ಬಳ್ಳಾರಿಯ ಪಾರ್ಶ್ವನಾಥ ಜೈನ ಶ್ವೇತಾಂಬರ ಮಂದಿರದ ಶತಮಾನೋತ್ಸವದ ಅಂಗವಾಗಿ ಇಂದು ಅಂಚೆ ಇಲಾಖೆ ವಿಶೇಷ ಅಂಚೆ ಲಕೋಟೆ ಬಿಡುಗಡೆ ಮಾಡಿದೆ. ಅಂಚೆ ಅಧೀಕ್ಷಕ ಪಿ. ಚಿದಾನಂದ ಮಾತನಾಡಿ, ಸಮಾಜದ ಪ್ರತಿಯೊಬ್ಬರು ಅಂಚೆ ಇಲಾಖೆಯ ಜನೋಪಯೋಗಿ ಸೇವೆಗಳನ್ನು ಪಡೆದುಕೊಳ್ಳಬೇಕು ಎಂದು ಹೇಳಿದರು. ಜೈನ ವಾಸ್ತುಶಿಲ್ಪದ ವೈಶಿಷ್ಟ್ಯವುಳ್ಳ ಶತಮಾನದ ಸಂಭ್ರಮದಲ್ಲಿರುವ ಈ ಜೈನ ಮಂದಿರದ ವಿಶೇಷ ಲಕೋಟೆ ಜಗತ್ತಿಗೆ ಬಳ್ಳಾರಿಯ ಸಾಂಸ್ಕೃತಿಕ ಹಿರಿಮೆಯನ್ನು ಸಾರಲಿದೆ ಎಂದು ಹೇಳಿದರು.

<><><><>

ಸಂಕ್ಷಿಪ್ತ ಸುದ್ದಿಗಳು

1. ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಬೆಂಗಳೂರಿಗೆ ನಾಳೆ ಆಗಮಿಸಲಿದ್ದಾರೆ. ಬೆಂಗಳೂರಿನ ಹೆಸರಘಟ್ಟ ಸಮೀಪದಲ್ಲಿರುವ ಭಾರತೀಯ ತೋಟಗಾರಿಕೆ ಸಂಶೋಧನಾ ಕೇಂದ್ರದಲ್ಲಿ ಆಯೋಜಿಸಿರುವ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಕಾರ್ಯಕದಲ್ಲಿ ಭಾಗವಹಿಸಿ ನಂತರ ರೈತರೊಂದಿಗೆ ಸಂವಾದ ನಡೆಸಲಿದ್ದಾರೆ.
2. ಚಿಕ್ಕಬಳ್ಳಾಪುರ ಜಿಲ್ಲೆಯ ನಂದಿ ಗಿರಿಧಾಮದಲ್ಲಿ ಇದೇ ೧೯ರಂದು ಸಚಿವ ಸಂಪುಟ ಸಭೆ ನಡೆಯಲಿದೆ ಎಂದು ಸರ್ಕಾರಿ ಮೂಲಗಳು ತಿಳಿಸಿವೆ.
3. ಬೆಳಗಾವಿ ಜಿಲ್ಲೆಯ ಸವದತ್ತಿಯ ಯಲ್ಲಮ್ಮ ಗುಡ್ಡದಲ್ಲಿ ಯಾತ್ರಿಕರಿಗೆ ಅಗತ್ಯವಾದ ಮೂಲಸೌಲಭ್ಯಗಳನ್ನು ಕಲ್ಪಿಸಲಾಗುವುದು ಎಂದು ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ್ ತಿಳಿಸಿದ್ದಾರೆ.
4. ಉಡುಪಿ ಜಿಲ್ಲೆ ಹೆಣ್ಣು-ಗಂಡು ಲಿಂಗಾನೂಪಾಥದಲ್ಲಿ ರಾಜ್ಯಕ್ಕೆ ಪ್ರಥಮ ಸ್ಥಾನ ಗಳಿಸಿದೆ ಎಂದು ಜಿಲ್ಲಾಧಿಕಾರಿ ಕೆ. ವಿದ್ಯಾಕುಮಾರಿ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>